ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ಸದಸ್ಯರ ಹೆಸರು	:	ಶ್ರೀ ಹೆಚ್.ಎಂ.ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು)
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	**901** (೩೦೩)
ಉತ್ತರಿಸಬೇಕಾದ ದಿನಾಂಕ	:	10.03.2021
ಉತ್ತರಿಸಬೇಕಾದ ಸಚಿವರು	:	ವಸತಿ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ ಯಾವ ಯಾವ ಯೋಜನೆಗಳ ಮೂಲಕ ಬಡವರಿಗೆ ಮನೆಗಳನ್ನು ಹಂಚುವ ಕಾರ್ಯಕ್ರಮ ರೂಪಿಸಲಾಗಿದೆ; (ವಿವರ ನೀಡುವುದು)	ರಾಜ್ಯದಲ್ಲಿ ಈ ಕೆಳಕಂಡ ಯೋಜನೆಗಳ ಮೂಲಕ ಬಡವರಿಗೆ ಮನೆಗಳನ್ನು ಹಂಚುವ ಕಾರ್ಯಕ್ರಮ ವನ್ನು ರೂಪಿಸಲಾಗಿದೆ. **ಕೇಂದ್ರ ಪುರಸ್ಕೃತ ಯೋಜನೆಗಳು:** • ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾಮೀಣ ಮತ್ತು ನಗರ) **ರಾಜ್ಯ ಪುರಸ್ಕೃತ ಯೋಜನೆಗಳು:** • ಬಸವ ವಸತಿ ಯೋಜನೆ • ಡಾ. ಬಿ.ಆರ್. ಅಂಬೇಡ್ಕರ್ ವಸತಿ ಯೋಜನೆ (ಗ್ರಾಮೀಣ ಮತ್ತು ನಗರ) • ದೇವರಾಜು ಅರಸು ವಸತಿ ಯೋಜನೆ (ಗ್ರಾಮೀಣ & ನಗರ) • ವಾಜಪೇಯಿ ನಗರ ವಸತಿ ಯೋಜನೆ
ಆ)	ಕಳೆದ ಎರಡು ವರ್ಷಗಳಿಂದ ನಿರ್ಮಾಣವಾಗದೇ ಉಳಿದಿರುವ ಮನೆಗಳನ್ನು ಪೂರ್ಣಗೊಳಿಸಲು ಸರ್ಕಾರ ಅಂತಿಮ ಗಡುವು ನಿಗದಿಪಡಿಸಿದೆಯೇ;	ಸರ್ಕಾರದ "ಮನೆ" ಮಾರ್ಗಸೂಚಿಯನ್ವಯ ನಿಗಮದಿಂದ ಕಾಮಗಾರಿ ಆದೇಶ ನೀಡಿದ 90 ದಿನಗಳೊಳಗಾಗಿ ಫಲಾನುಭವಿಯು ಮನೆಯ ಕಾಮಗಾರಿಯನ್ನು ಪ್ರಾರಂಭಿಸಬೇಕಿದ್ದು, ಒಂದು ವರ್ಷದೊಳಗಾಗಿ ಮನೆಯನ್ನು ಪೂರ್ಣಗೊಳಿಸ ಬೇಕಾಗಿರುತ್ತದೆ. ನಿಗದಿತ ಸಮಯದಲ್ಲಿ ಕಾಮಗಾರಿಯನ್ನು ಪ್ರಾರಂಭಮಾಡಿಕೊಳ್ಳದ ಮನೆಗಳನ್ನು ಮನೆ ಮಾರ್ಗಸೂಚಿಗಳನ್ವಯ ಬ್ಲಾಕ್ ಮಾಡಲಾಗಿತ್ತು. ಜನ ಪ್ರತಿನಿದಿಗಳ ಕೋರಿಕೆಯಂತೆ ಸರಕಾರವು ದಿನಾಂಕ: 14.02.2020 ರಂದು ಆದೇಶ ಹೊರಡಿಸಿ ವಿವಿಧ ವಸತಿ ಯೋಜನೆಗಳಡಿ ನಿಗದಿತ ಸಮಯದಲ್ಲಿ ಪ್ರಾರಂಭಗೊಳ್ಳದೇ ಬ್ಲಾಕ್ ಆಗಿದ್ದ ಮನೆಗಳನ್ನು ತೆರವುಗೊಳಿಸಿ, ವಾಸ್ತವವಾಗಿ ಪ್ರಾರಂಭವಾಗಿರುವ ಮನೆಗಳ ಛಾಯಾಚಿತ್ರಗಳನ್ನು ಜಿಪಿಎಸ್ ಗೆ ಅಳವಡಿಸಲು ಒಂದೂವರೆ ತಿಂಗಳ ಕಾಲಾವಕಾಶವನ್ನು ನೀಡಲಾಗಿತ್ತು. ಈ ಅವಧಿಯಲ್ಲಿ ಜಿ.ಪಿ.ಎಸ್. ಮಾಡಿರುವ ಫಲಾನುಭವಿಗಳನ್ನು ಪ್ರಗತಿಗೆ ಪರಿಗಣಿಸಿ ಉಳಿದ ಎಲ್ಲಾ ಮನೆಗಳನ್ನು ಸರ್ಕಾರದ ಆದೇಶ ಸಂಖ್ಯೆ: ವಇ 12 ಹೆಚ್ಎಹೆಚ್ 2020, ದಿನಾಂಕ:19.05.2020 ರನ್ವಯ ರದ್ದುಪಡಿಸಲಾಗಿದೆ.

ಕ್ರ.ಸಂ	ಪ್ರಶ್ನೆ	ಉತ್ತರ
ಇ)	ವಸತಿ ಇಲಾಖೆಯಡಿ ನಿರ್ಮಾಣವಾಗುವ ಮನೆಗಳ ಗುಣಮಟ್ಟದ ಕುರಿತು ಪ್ರಶ್ನೆಗಳು ಎದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಮೇಲ್ಕಂಡ ವಸತಿ ಯೋಜನೆಗಳಡಿಯಲ್ಲಿ ಸ್ವತಃ ಫಲಾನುಭವಿಗಳೇ ಮನೆಗಳನ್ನು ನಿರ್ಮಾಣ ಮಾಡಿಕೊಳ್ಳುವುದರಿಂದ ಮನೆಗಳ ಗುಣಮಟ್ಟದ ಕುರಿತಂತೆ ಪ್ರಶ್ನೆ ಉದ್ಭವಿಸುವುದಿಲ್ಲ. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ, ಟೆಂಡರ್ ನಿಯಮಾವಳಿ ಪ್ರಕಾರ ಕಾನೂನು ಕ್ರಮ ತೆಗೆದುಕೊಳ್ಳಲಾಗುವುದು.
ಈ)	ಕಳಪೆ ಗುಣಮಟ್ಟದ ಮನೆಗಳನ್ನು ನಿರ್ಮಿಸಿದರೆ ಸಂಬಂಧಪಟ್ಟ ಗುತ್ತಿಗೆದಾರನ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಳ್ಳುತ್ತದೆ ?	

ಸಂಖ್ಯೆ :ವಇ 96 ಹೆಚ್‌ಎಹೆಚ್ 2021

(ವಿ. ಸೋಮಣ್ಣ)
ವಸತಿ ಸಚಿವರು